ಕರ್ನಾಟಕಸರ್ಕಾರ
(ಕಂದಾಯ ಇಲಾಖೆ)
ಉಪತಹಶೀಲ್ದಾರವರ ನ್ಯಾಯಾಲಯ ನಾಡಕಛೇರಿ ಹೊಸಹಳ್ಳಿ

ಸಂ/ಕಂ/ಹ.ಬ./ನಾಕಹೊ/84/2013-14. ದಿನಾಂಕ:22-08-2016.

| ವಾದಿಗಳು | ಪ್ರತಿವಾದಿಗಳು |
|---|---|
| ಸಂದೀಪ್ ಮೈನರ್ ತಂದೆ ವೀರಣ್ಣ ಗಾರ್ಡಿಯನ್ ರೋಟ್ಟಿಲ ಸೂರಯ್ಯ ಸಕಲಾಪುರದಹಟ್ಟಿ ಗ್ರಾಮ ಕೂಡ್ಲಿಗಿ ತಾಲೂಕು | ಹೆಚ್.ಡಿ.ಧನಂಜಯ ತಂದೆ ದಿವಾಕರ ಸಕಲಾಪುರದಹಟ್ಟಿ ಗ್ರಾಮ ಕೂಡ್ಲಿಗಿ ತಾಲೂಕು |
| ಕೂಡ್ಲಿಗಿ ತಾಲೂಕು ಹುಲಿಕೇರಿ ಗ್ರಾಮದ ಸನಂ 230ಎ. ವಿಸ್ತೀರ್ಣ 2-28 ಎಕ್ರೆ ಜಮೀನನ್ನು ಪಾಲು ವಿಭಾಗದ ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಹುಲಿಕೇರಿ ಗ್ರಾಮದ ಸನಂ 230ಎ. ವಿಸ್ತೀರ್ಣ 2-28 ಎಕ್ರೆ ಜಮೀನನ್ನು ಸದರಿ ತಾಲೂಕು ಸಕಲಾಪುರದಹಟ್ಟಿ ಗ್ರಾಮದ ಬೊಮ್ಮಯ್ಯ ತಂದೆ ಸಣ್ಣ ಬಸವನಗೌಡ ಇವರು ದಿನಾಂಕ 30-09-2009 ರ ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಹುಲಿಕೇರಿ ಇವರು ನಮೂನೆ-21 ನೋಟಿಸನ್ನು ದಿನಾಂಕ 16-11-2010. ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಸದರಿ ತಾಲೂಕು ಸಕಲಾಪುರದಹಟ್ಟಿ ಗ್ರಾಮದ ಹೆಚ್.ಡಿ.ಧನಂಜಯ ತಂದೆ ದಿವಾಕರ ಇವರು ತಕರಾರು ಅರ್ಜಿ ಸಲ್ಲಿಸಿರುವ ಕಾರಣ ಈ ಪ್ರಕರಣದ ಎಂ.ಆರ್.ನಂಬರ್: 26/2010-11. ದಿನಾಂಕ 20-12-2010. ರಲ್ಲಿ ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 12-08-2013 ರಿಂದ 22-08-2016 ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಗೈರು ಹಾಜರಾಗಿರುತ್ತಾರೆ. ತಕರಾರುದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಹುಲಿಕೇರಿ ಗ್ರಾಮದ ಸನಂ 230ಎ. ವಿಸ್ತೀರ್ಣ 2-28 ಎಕ್ರೆ ಜಮೀನು ನನ್ನ ಹೆಂಡತಿಯಾದ ಕಂಪಾಳಪ್ಪಳ ತಿಪ್ಪಮ್ಮ ಗಂಡ ಬೊಮ್ಮಯ್ಯ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇದ್ದು ಇವರು ದಿನಾಂಕ 09-10-2009 ರಂದು ನಿಧನ ಹೊಂದಿರುತ್ತಾರೆ. ನಾವುಗಳು ಸದರಿ ಜಮೀನನ್ನು ದಿನಾಂಕ 30-09-2010 ರಂದು ನನ್ನ ಎರಡನೇ ಮಗ ವೀರಣ್ಣ ಇವರ ಎರಡನೇ ಹೆಂಡತಿ ಕರಿಬಸಮ್ಮ ಇವರ ಎರಡನೇ ಮಗನಾದ ಸಂದೀಪ್ ಇವರ ಹೆಸರಲ್ಲಿ ನನ್ನ ಸ್ವಇಚ್ಛೇಯಿಂದ ಷಡ್ಯೂಲ್ ದಾಖಲಾ ಆಸ್ತೀಯನ್ನು ಪಾಲು ವಿಭಾಗದ ಪತ್ರ ಪ್ರಕಾರ ನನ್ನ ಹಿಸ್ಸಾಕ್ಕೆ ಬಂದಿರುವುದರಿಂದ ಸದರಿ ದಿನಾಂಕದಂದು ಪಾಲು ವಿಭಾಗದ ಪತ್ರ ಬರೆಯಿಸಿ ಕೊಟ್ಟಿದ್ದು ಸದರಿ ಪಾಲು ವಿಭಾಗದ ಪತ್ರ ಪ್ರಕಾರ ಸಂದೀಪ್ ಇವರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿ ಅರ್ಜಿ ಮಾತ್ರ ಸಲ್ಲಿಸಿದ್ದು ವಿಚಾರಣೆಗೆ ಗೈರು ಹಾಜರಾಗಿರುತ್ತಾರೆ.

ವಿಚಾರಣೆಯಲ್ಲಿ ತಕರಾರುದಾರರು ಹಾಜರಾಗಿದ್ದು ಸದರಿ ವಿವಾದಿತ ಜಮೀನನ್ನು ನಾವುಗಳು ಅಣ್ಣ ತಮ್ಮಂದಿರುಗಳು ಸರಿಯಾಗಿ ಪಾಲು ವಿಭಾಗವಾಗಿರುವುದಿಲ್ಲ ಕಾರಣ ಸದರಿ ಪಾಲು ವಿಭಾಗದ ಪತ್ರದಂತೆ ಅರ್ಜಿದಾರರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ನಮ್ಮ ತಕರಾರು ಇರುವುದಾಗಿ ಕೋರಿರುತ್ತಾರೆ.

ಪು.ತಿ.ನೋ-2

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ತಕರಾರುದಾರರ ಹೇಳಿಕೆಗಳನ್ನು ಕೇಳಿ ಅರ್ಜಿದಾರರು ವಿಚಾರಣೆಗೆ ಹಾಜರಾಗಿ ಯಾವುದೇ ಹೇಳಿಕೆ ಮತ್ತು ದಾಖಲೆಗಳನ್ನು ಸಲ್ಲಿಸಲು ವಿಫಲರಾಗಿರುತ್ತಾರೆ. ಮತ್ತು ಸದರಿ ಪ್ರಕರಣವನ್ನು ಪರಿಶೀಲಿಸಲಾಗಿ ಪಾಲು ವಿಭಾಗಕ್ಕೆ ಅರ್ಜಿ ಸಲ್ಲಿಸಿದ್ದು ತಮ್ಮ ಒಬ್ಬ ಮಗನ ಹೆಸರಿಗೆ ಹಕ್ಕು ಬದಲಾವಣೆ ಮಾಡುವಂತೆ ಅರ್ಜಿ ಸಲ್ಲಿಸಿರುವುದರಿಂದ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಹುಲಿಕೇರಿ ಗ್ರಾಮದ ಸನಂ 230ಎ. ವಿಸ್ತೀರ್ಣ 2-28 ಎಕ್ರೆ ಜಮೀನನ್ನು ದಿನಾಂಕ 30-09-2010 ರ ಪಾಲು ವಿಭಾಗದ ಪತ್ರದಲ್ಲಿ ಒಬ್ಬನೇ ಮಗನ ಹೆಸರಲ್ಲಿ ಹಕ್ಕು ಬದಲಾವಣೆ ಮಾಡುವಂತೆ ಕೋರಿ ಅರ್ಜಿ ಸಲ್ಲಿಸಿರುವುದರಿಂದ ಅರ್ಜಿದಾರರ ಕೋರಿಕೆಯನ್ನು ತಿರಸ್ಕರಿಸುತ್ತಾ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 22-08-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಚೇರಿ ಹೊಸಹಳ್ಳಿ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಸಂದೀಪ್ ಮೈನರ್ ತಂದೆ ವೀರಣ್ಣ ಗಾರ್ಡಿಯನ್ ರೋಟ್ಟಿಲ ಸೂರಯ್ಯ ಸಕಲಾಪುರದಹಟ್ಟಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ಧನಂಜಯ ತಂದೆ ದಿವಾಕರ ಸಕಲಾಪುರದಹಟ್ಟಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.